ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/152/2022–23

ದಿನಾಂಕ.21–02–2026

## <u>ಸುತ್ತೋಲೆ</u>

ವಿಷಯ: ಮೈಸೂರು ವಿಶ್ವವಿದ್ಯಾನಿಲಯ ಆಯೋಜಿಸಿರುವ **"ರಾಷ್ಟ್ರೀಯ ವಿಜ್ಞಾನ ದಿನಾಚರಣೆ"** ಸಮಾರಂಭಕ್ಕೆ ಹಾಜರಾಗುವ ಬಗ್ಗೆ.

ಉಲ್ಲೇಖ: ಮಾನ್ಯ ಕುಲಪತಿಗಳು, ಇವರ ಟಿಪ್ಪಣಿ ಸಂಖ್ಯೆ:ಕುಪ/ಇತರೆ/2025–26, ದಿನಾಂಕ.20.02.2026

–:–

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ ದಿನಾಂಕ.04.03.2026ರಂದು ಬೆಳಗ್ಗೆ 11.00 ಗಂಟೆಗೆ **"ರಾಷ್ಟ್ರೀಯ ವಿಜ್ಞಾನ ದಿನಾಚರಣೆ"** ಸಮಾರಂಭವನ್ನು ಆಯೋಜಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಪ್ರೊ. ವಿ.ಕೆ. ಮನ್‌ಚಂದ, ವಿಶ್ರಾಂತ ಮುಖ್ಯಸ್ಥರು, ರೇಡಿಯೊಕೆಮಿಸ್ಟ್ರಿ ವಿಭಾಗ, ಬಾಬಾ ಆಟೊಮಿಕ್ ರಿಸರ್ಚ್ ಸೆಂಟರ್, ಮುಂಬೈ, ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ **"ವಿಜ್ಞಾನ ದಿನ"**ದ ಕುರಿತು ವಿಶೇಷ ಉಪನ್ಯಾಸವನ್ನು ನೀಡುವರು ಮತ್ತು ಪ್ರೊ.ಎನ್.ಕೆ ಲೋಕನಾಥ್, ಮಾನ್ಯ ಕುಲಪತಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳು/ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಅಧ್ಯಾಪಕರುಗಳು/ಅಧ್ಯಾಪಕೇತರ ಉದ್ಯೋಗಿಗಳು/ಅತಿಥಿ ಉಪನ್ಯಾಸಕರು/ಸಂಶೋಧಕರು ಹಾಗೂ ವಿದ್ಯಾರ್ಥಿಗಳು ದಿನಾಂಕ.04.03.2026ರಂದು ಬೆಳಗ್ಗೆ 10.30 ಗಂಟೆಗೆ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕಾಗಿ ತಿಳಿಸಿದೆ.

**ಕಾರ್ಯಕ್ರಮ ಮುಗಿದ ನಂತರ ತಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ಹಾಜರಾಗುವುದು.**

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

**ಸೂಚನೆ:** **<u>ಕಾರ್ಯಕ್ರಮದಲ್ಲಿ ಹಾಜರಾಗಿರುವ ಬಗ್ಗೆ ಹಾಜರಾತಿ ದೃಢೀಕರಣವನ್ನು ಈ ಕಛೇರಿಗೆ ಸಲ್ಲಿಸತಕ್ಕದ್ದು.</u>**

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು ಮತ್ತು ಸಂಯೋಜನಾಧಿಕಾರಿಗಳು.
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
3. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.

} ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಎಲ್ಲಾ ಅಧ್ಯಾಪಕರು/ಅಧ್ಯಾಪಕೇತರರು/ಅತಿಥಿ ಉಪನ್ಯಾಸಕರು/ಸಂಶೋಧಕರು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರಬೇಕಾಗಿ ತಿಳಿಸಿದೆ.

5. ನಿರ್ದೇಶಕರು, ಐ.ಸಿ.ಡಿ ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–**ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
6. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕಛೇರಿ ಪ್ರತಿ.